ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD North/0009/2018-19 ದಿನಾಂಕ: 29–07–2019.

# ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಖಾತಾ ಸಂಖ್ಯೆ: 04, ವಾರ್ಡ್ ನಂ. 05, ಸರ್ವೆ ನಂ. 50, 51 & 54, ಬೆಳ್ಳಹಳ್ಳಿ ಗ್ರಾಮ, ಬ್ಯಾಟರಾಯನಪುರ ಉಪವಿಭಾಗ, ಯಲಹಂಕ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 3 (ವಿಂಗ್ –5), ಬಿಲ್ಡಿಂಗ್ – 4 (ವಿಂಗ್ – 6 & 7), ಬಿಲ್ಡಿಂಗ್ – 5 (ವಿಂಗ್ – 8 & 9) ವಸತಿ ಸಮುಚ್ಚಯ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 22–07–2019.

2) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD North/0009/2018-19, ದಿನಾಂಕ: 01–10–2018.

* * * * * * *

ಆಸ್ತಿ ಖಾತಾ ಸಂಖ್ಯೆ: 04, ವಾರ್ಡ್ ನಂ. 05, ಸರ್ವೆ ನಂ. 50, 51 & 54, ಬೆಳ್ಳಹಳ್ಳಿ ಗ್ರಾಮ, ಬ್ಯಾಟರಾಯನಪುರ ಉಪವಿಭಾಗ, ಯಲಹಂಕ ವಲಯ, ಬೆಂಗಳೂರು, ಇಲ್ಲಿನ ಸ್ವತ್ತಿನಲ್ಲಿ ಬಿಲ್ಡಿಂಗ್ – 1 (ವಿಂಗ್ – 1 & 2), ಬಿಲ್ಡಿಂಗ್ – 2 (ವಿಂಗ್ – 3 & 4), ಬಿಲ್ಡಿಂಗ್ – 3 (ವಿಂಗ್ –5), ಬಿಲ್ಡಿಂಗ್ – 4 (ವಿಂಗ್ – 6 & 7), ಬಿಲ್ಡಿಂಗ್ – 5 (ವಿಂಗ್ – 8 & 9) ಗಳಲ್ಲಿ ಸಾಮಾನ್ಯ ತಳ ಮಹಡಿಯನ್ನೊಳಗೊಂಡಂತೆ ನೆಲ + ಮೇಲಿನ 23 ಅಂತಸ್ತುಗಳು ಮತ್ತು ಬಿಲ್ಡಿಂಗ್ – 6 (ವಿಂಗ್ – 10) ರಲ್ಲಿ 2 ತಳ + ನೆಲ + ಮೇಲಿನ 17 ಅಂತಸ್ತುಗಳಲ್ಲಿ 1596 ವಸತಿ ಘಟಕಗಳು ಮತ್ತು 184 EWS ಘಟಕಗಳನ್ನೊಳಗೊಂಡಂತೆ ಒಟ್ಟಾರೆ 1780 ಘಟಕಗಳುಳ್ಳ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 01–10–2018 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ.

ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 3 (ವಿಂಗ್ –5), ಬಿಲ್ಡಿಂಗ್ – 4 (ವಿಂಗ್ – 6 & 7), ಬಿಲ್ಡಿಂಗ್ – 5 (ವಿಂಗ್ – 8 & 9) ಗಳಲ್ಲಿ ಸಾಮಾನ್ಯ ತಳ ಮಹಡಿಯನ್ನೊಳಗೊಂಡಂತೆ ನೆಲ + ಮೇಲಿನ 23 ಅಂತಸ್ತುಗಳ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ದಿನಾಂಕ: 23–07–2019 ರಂದು ಪರಿಶೀಲಿಸಲಾಗಿದ್ದು, ಮಂಜೂರಾತಿ ನಕ್ಷೆಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ಕಾಮಗಾರಿಯು ಪ್ರಗತಿಯಲ್ಲಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 29–07–2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ **ರೂ. 8,36,000/–** ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000219 ದಿನಾಂಕ: 29–07–2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ಕಟ್ಟಡಗಳ ಪೈಕಿ ಬಿಲ್ಡಿಂಗ್ – 3 (ವಿಂಗ್ –5), ಬಿಲ್ಡಿಂಗ್ – 4 (ವಿಂಗ್ – 6 & 7), ಬಿಲ್ಡಿಂಗ್ – 5 (ವಿಂಗ್ – 8 & 9) ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

(2) copies

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ಮಂಜೂರಾದ ನಕ್ಷೆಯಲ್ಲಿನ ಉಳಿದ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಿ, ಸ್ತಂಭಗಳನ್ನು ಅಳವಡಿಸಿದ ನಂತರ ಸದರಿ ಕಟ್ಟಡಕ್ಕೆ ಅಂತಿಮ ಪ್ರಾರಂಭಿಕ ಪ್ರಮಾಣಪತ್ರಕ್ಕಾಗಿ ಈ ಕಛೇರಿಗೆ ಮನವಿ ಸಲ್ಲಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
6. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

M/s Sobha Limited
Sarjapur - Marathahalli Outer Ring Road,
Bellanduru Post,
Bengaluru - 560103.

**ಪ್ರತಿಯನ್ನು:**

1. ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddu Ki 29/7/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

O/C

29/7/19 29/7